# <u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ : 1020 (1290)

ಸದಸ್ಯರ ಹೆಸರು : ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 21.08.2025

ಉತ್ತರಿಸುವ ಸಚಿವರು : ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರವಾಸೋದ್ಯಮ ಇಲಾಖೆಯಿಂದ ಯುವಕರಿಗೆ ನೀಡುತ್ತಿದ್ದ ಟ್ಯಾಕ್ಸಿ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆಯೇ; ಈ ಯೋಜನೆಯನ್ನು ಸ್ಥಗಿತ ಮಾಡಲು ಕಾರಣ ಏನು; (ವಿವರ ನೀಡುವುದು) | ಹೌದು.<br><br>2020-21ನೇ ಸಾಲಿನಿಂದ ಅನುದಾನದ ಕೊರತೆಯಿಂದಾಗಿ ಪ್ರವಾಸಿ ಟ್ಯಾಕ್ಸಿ ಖರೀದಿಸಲು ಸಹಾಯಧನ ವಿತರಿಸುವ ನೂತನ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಿಲ್ಲ. |
| ಆ) | ಕಳೆದ ಐದು ವರ್ಷಗಳಲ್ಲಿ ಈ ಯೋಜನೆಯಡಿ ಎಷ್ಟು ಜನ ಲಾಭ ಪಡೆದುಕೊಂಡಿದ್ದಾರೆ; 2024-25ರಲ್ಲಿ ಇದರ ಹಂತ ಹೇಗಿತ್ತು; ಈ ಯೋಜನೆಯ ಕಡಿತದಿಂದ ಸಾವಿರಾರು ನಿರುದ್ಯೋಗಿ ಯುವಕರು ಅತಂತ್ರ ಸ್ಥಿತಿಯಲ್ಲಿದ್ದಾರೆ, ಸರ್ಕಾರ ಇದನ್ನು ಪರಿಗಣಿಸಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | 2023-24ನೇ ಸಾಲಿನಲ್ಲಿ 2013-14ನೇ ಸಾಲಿನಿಂದ 2019-20ನೇ ಸಾಲಿನವರೆಗೆ ಗುರಿ ಸಾಧಿಸದೇ ಇರುವುದರಿಂದ ಅಂತಹ ಜಿಲ್ಲೆಗಳ ಗುರಿಗಳನ್ನು ಗದಗ ಜಿಲ್ಲೆಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಹಾಗೂ ಹಿಂದುಳಿದ ವರ್ಗ, ಅಲ್ಪಸಂಖ್ಯಾತ ವರ್ಗದ ನಿರುದ್ಯೋಗಿ ಅಭ್ಯರ್ಥಿಗಳಿಗೆ 198 ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸಲಾಗಿದೆ.<br><br>2024-25ನೇ ಸಾಲಿನಲ್ಲಿ ಪ್ರವಾಸಿ ಟ್ಯಾಕ್ಸಿ ಸಹಾಯಧನ ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಿಲ್ಲ.<br><br>2025-26ನೇ ಸಾಲಿನಲ್ಲಿ ಈ ಯೋಜನೆಯನ್ನು ಹಮ್ಮಿಕೊಳ್ಳಲು ಕ್ರಿಯಾ ಯೋಜನೆಯಲ್ಲಿ ಸೇರಿಸಲಾಗಿದ್ದು, ಪರಿಶೀಲನೆಯಲ್ಲಿರುತ್ತದೆ. |
| ಇ) | ಹಳೆ ಅರ್ಜಿದಾರರಿಗೆ ಈ ಯೋಜನೆಯಡಿ ಅನುಮೋದನೆ ಆಗಿದ್ದರೂ ಅವರಿಗೆ ವಾಹನ ಖರೀದಿಗೆ ನೆರವು ಕಡಿತಗೊಳಿಸಲಾಗಿದೆ ಎಂಬ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | ಈ ರೀತಿಯ ದೂರುಗಳು ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ. ಇಲಾಖೆಯಿಂದ ನಿಗಧಿಪಡಿಸಿ ಹಂಚಿಕೆ ಮಾಡಿರುವ ಪ್ರವಾಸಿ ಟ್ಯಾಕ್ಸಿಗಳನ್ನು ಖರೀದಿಸಲು ಸಹಾಯಧನ ವಿತರಿಸಲಾಗಿರುತ್ತದೆ. |
| ಈ) | ಪ್ರವಾಸೋದ್ಯಮವನ್ನು ಉತ್ತೇಜಿಸುವ ದೃಷ್ಟಿಯಿಂದ ಈ ಯೋಜನೆಯು ದೊಡ್ಡ ಪಾತ್ರ ವಹಿಸುತ್ತಿತ್ತು. ಇದನ್ನು ಕಡಿತಗೊಳಿಸುವುದರಿಂದ ರಾಜ್ಯದ ಪ್ರವಾಸೋದ್ಯಮಕ್ಕೂ | 2025-26ನೇ ಸಾಲಿನಲ್ಲಿ ಪ್ರವಾಸಿ ಟ್ಯಾಕ್ಸಿ ಯೋಜನೆಯನ್ನು ಹಮ್ಮಿಕೊಳ್ಳಲು ಕ್ರಿಯಾ ಯೋಜನೆಯಲ್ಲಿ ಸೇರಿಸಲಾಗಿದ್ದು, ಪರಿಶೀಲನೆಯಲ್ಲಿರುತ್ತದೆ. |

| | | |
|---|---|---|
| | ಹಾನಿಯಾಗಬಹುದೇ; ಈ ಯೋಜನೆಯನ್ನು ಪುನಃ ಆರಂಭಿಸುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ; (ಸಂಪೂರ್ಣ ಮಾಹಿತಿ ನೀಡುವುದು) | |
| ಉ) | ಈ ಟ್ಯಾಕ್ಸಿ ಯೋಜನೆಯ ಬದಲಿಗೆ ಸರ್ಕಾರವು ಬೇರೆ ಯಾವುದೇ ಪರ್ಯಾಯ ಯೋಜನೆ ರೂಪಿಸಿದೆಯೇ; ಕೇಂದ್ರ ಸರ್ಕಾರದ ಸಹಯೋಗದಲ್ಲಿ ಈ ಯೋಜನೆಯನ್ನು ಪುನಃ ಜಾರಿಗೆ ತರುವ ಉದ್ದೇಶ ಸರ್ಕಾರ ಹೊಂದಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು) | ಪ್ರವಾಸೋದ್ಯಮ ಇಲಾಖೆಯಿಂದ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಯೋಜನೆಯಡಿ ನಿರುದ್ಯೋಗಿ ಉದ್ಯೋಗಿಗಳಿಗೆ ಸ್ವ-ಉದ್ಯೋಗ ಕಲ್ಪಿಸಿಕೊಳ್ಳಲು ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br><br>1. ಪ್ರವಾಸೋದ್ಯಮ ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ.<br>• Food & Bewerage Steward Service<br>• Front Office Associate.<br>• Room Attendant<br>• Multi Cuisine Cook.<br>2. ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು Entrepreneurship Programme (EP)ತರಬೇತಿ ಹಾಗೂ ಮೊಬೈಲ್ ಕ್ಯಾಂಟೀನ್ ವಾಹನವನ್ನು ಖರೀದಿಸಲು ಸಹಾಯಧನ ವಿತರಿಸುವ ಕಾರ್ಯಕ್ರಮ.<br>3. ಪ್ರವಾಸಿ ಮಾರ್ಗದರ್ಶಿ ತರಬೇತಿ ಕಾರ್ಯಕ್ರಮ.<br><br>2025-26ನೇ ಸಾಲಿನಲ್ಲಿ ಪ್ರವಾಸಿ ಟ್ಯಾಕ್ಸಿ ಯೋಜನೆಯನ್ನು ಹಮ್ಮಿಕೊಳ್ಳಲು ಕ್ರಿಯಾ ಯೋಜನೆಯಲ್ಲಿ ಸೇರಿಸಲಾಗಿದ್ದು, ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ: ಟಿಓಆರ್ 222 ಟಿಡಿವಿ 2025**

(ಹೆಚ್.ಕೆ.ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು